## ಹಿರಿಯ ಸಿವಿಲ್ ಮತ್ತು ಜೆ ಎಂ ಎಫ್ ಸಿ ನ್ಯಾಯಾಲಯ, ಹಿರಿಯೂರು

## ಸಿ.ಸಿ ನಂ.13/2023

| | | | |
|---|---|---|---|
| ಸಾಕ್ಷಿದಾರರ ಹೆಸರು | – | ತಿಪ್ಪೇಸ್ವಾಮಿ | ಸಿಡಬ್ಲ್ಯೂ-9 |
| ತಂದೆಯ ಹೆಸರು | – | ಕರಿಯಣ್ಣ | ಪಿಡಬ್ಲ್ಯೂ-7 |
| ವಯಸ್ಸು | – | 40 ವರ್ಷ | |
| ಉದ್ಯೋಗ | – | ಚಾಲಕ | |
| ವಾಸ | – | ಲಕ್ಷ್ಮಮ್ಮ ಬಡಾವಣೆ ಹಿರಿಯೂರು | |

**ದಿನಾಂಕ:30.10.2024 ರಂದು ಸಾಕ್ಷಿಯನ್ನು ಕರೆಸಲಾಯಿತು ಮತ್ತು ಪ್ರಮಾಣ ವಚನ ಬೋಧಿಸಲಾಯಿತು.**

**ಸಾಕ್ಷಿದಾರರ ಮುಖ್ಯ ವಿಚಾರಣೆಃ ಮಾನ್ಯ ಸ ಸ ಅ ರವರಿಂದ**

ಚಾಸಾ.10 ರವರು ನನಗೆ ಗೊತ್ತಿಲ್ಲ. ಸಾಕ್ಷಿಗೆ ನಿಪಿ-14 ರಲ್ಲಿರುವ ಸಹಿ ನೋಡಿ ಗುರುತಿಸಿದ್ದು ಸಹಿಯನ್ನು ನಿಪಿ-14(ಬಿ ) ಎಂದು ಗುರುತಿಸಲಾಯಿತು. ನಿಪಿ-14 ಕ್ಕೆ ಅಂದಾಜು 2-3 ವರ್ಷಗಳ ಕೆಳಗೆ ಪೊಲೀಸ್ ಠಾಣೆಯಲ್ಲಿ ಸಹಿ ಮಾಡಿದ್ದೇನೆ. ಯಾವ ಕಾರಣಕ್ಕೆ ಸಹಿ ಮಾಡಿದ್ದೇನೆ ಎಂದು ಗೊತ್ತಿಲ್ಲ. ಪೊಲೀಸರು ಸಹಿ ಮಾಡಲು ಹೇಳಿದ್ದರಿಂದ ಆ ದಾಖಲೆಗಳಿಗೆ ಸಹಿ ಮಾಡಿದ್ದೇನೆ. ಪೊಲೀಸರು ನನ್ನ ಸಮಕ್ಷಮ ಯಾವುದೇ ಕ್ರಮ ಜರುಗಿಸಿಲ್ಲ ಯಾವುದೇ ವಾಹನ ಅಮಾನತ್ತು ಪಡಿಸಿಕೊಂಡಿಲ್ಲ. ನನ್ನ ಜೊತೆ ಯಾರು ಇರಲಿಲ್ಲ. ದಾಖಲೆಗಳಲ್ಲಿ ಬರೆದ ವಿಚಾರ ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಬೇಕೆಂದು ಮತ್ತು ಪಾಟೀ ಸವಾಲು ಮಾಡಲು ಅನುಮತಿ ನೀಡಬೇಕೆಂದು ಸ ಸ ಅಭಿಯೋಜಕರು ಕೋರಿದ್ದರಿಂದ ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ ಮಾನ್ಯ ಸ ಸ ಅ ರವರಿಂದಃ**

ದಿಃ 20.10.2022 ರಂದು 4 ರಿಂದ 4.30 ರ ಸಮಯದಲ್ಲಿ ನನ್ನ ಹಾಗೂ ಚಾಸಾ.10 ರವರ ಸಮಕ್ಷಮ ಜವನಗೊಂಡನಹಳ್ಳಿ ಗ್ರಾಮದ ಪೊಲೀಸ್ ಉಪಠಾಣೆ ಮುಂದೆ ಪೊಲೀಸರು ನಿಪಿ-14 ರಂತೆ ಪಂಚನಾಮೆ ಮಾಡಿ ಸ್ಥಳದಲ್ಲಿದ್ದ ಕಾರ್ ನಂ. ಎಂ ಹೆಚ್ 45 ಎಎಲ್ 6367 ನ್ನು

ವಶಪಡಿಸಿಕೊಂಡು ಪಂಚನಾಮೆ ಮಾಡಿದ್ದಾರೆ ಎಂದರೆ ಸರಿಯಲ್ಲ. ನನ್ನ ಸಮಕ್ಷಮ ಪಂಚನಾಮ ಮಾಡಿ ವಾಹನ ಅಮಾನತ್ತು ಪಡಿಸಿಕೊಂಡಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು ಆರೋಪಿತರ ಪರ ಶ್ರೀ ಬಿ ಕೆ ವಕೀಲರಿಂದ–ಏನೂ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯು ಹೇಳಿದ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಿಸಲಾಯಿತು )

ಓ ಹೇ ಕೇ ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ ಎಂ ಎಫ್ ಸಿ , ಹಿರಿಯೂರು